## 5. ಜಿ. ಕಸ್ತೂರಿರಂಗನ್, ಪಿಚ್ ಕ್ಯುರೇಟರ್

ಮಾಜಿ ಕ್ರಿಕೆಟಿಗ ಹಾಗೂ ಬಿಸಿಸಿಐ ಪಿಚ್ ಕ್ಯುರೇಟರ್ ಗೋಪಾಲಸ್ವಾಮಿ ಕಸ್ತೂರಿರಂಗನ್ ಚಾಮರಾಜಪೇಟೆ ನಿವಾಸದಲ್ಲಿ ಹೃದಯಾಘಾತದಿಂದ ನಿಧನರಾಗಿದ್ದಾರೆ. ಮೃತರ ನಿಧನಕ್ಕೆ ಕರ್ನಾಟಕ ಕ್ರಿಕೆಟ್ ವಲಯ ಕಂಬನಿ ಮಿಡಿದಿದೆ. ರಣಜಿ ಟ್ರೋಫಿ ಟೂರ್ನಿಯಲ್ಲಿ ಮೈಸೂರು ತಂಡ ಪ್ರತಿನಿಧಿಸಿದ್ದ ಕಸ್ತೂರಿರಂಗನ್, ಕ್ರಿಕೆಟ್‌ನಿಂದ ನಿವೃತ್ತಿ ಘೋಷಿಸಿದ ಬಳಿಕ ಪಿಚ್ ಕ್ಯುರೇಟರ್ ಆಗಿದ್ದರು. ಜೊತೆಗೆ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಉಪಾಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದ್ದಾರೆ.

ಕೆಎಸ್‌ಸಿಎ ಪಾಲಿಗೆ ಪೋಷಕರಂತೆ ಇದ್ದ ಅವರ ನಿಧನದಿಂದ ಕೆಎಸ್‌ಸಿಎಗೆ ತುಂಬಲಾರದ ನಷ್ಟವುಂಟಾಗಿದೆ ಎಂದು ಕೆಎಸ್‌ಸಿಎ ಖಜಾಂಚಿ ಹಾಗೂ ವಕ್ತಾರ ವಿನಯ್ ಮೃತ್ಯಂಜಯ ತಿಳಿಸಿದ್ದಾರೆ. ಮಧ್ಯಮ ವೇಗಿಯಾಗಿದ್ದ ಕಸ್ತೂರಿರಂಗನ್ 1948–1963ರವರೆಗೆ ಮೈಸೂರು ರಾಜ್ಯ ತಂಡವನ್ನು ದೇಶೀಯ ಕ್ರಿಕೆಟ್‌ನಲ್ಲಿ ಪ್ರತಿನಿಧಿಸಿದ್ದರು. 36 ಪ್ರಥಮ ದರ್ಜೆ ಪಂದ್ಯಗಳಿಂದ 94 ವಿಕೆಟ್ ಕಬಳಿಸಿದ್ದರು.

ಆಧಾರ:ವಿಜಯವಾಣಿ, ದಿನಾಂಕ:20.08.2020